148ನೇ ಅಧಿವೇಶನ
ನಿ-72
ಕ್ರ-73 ಕಂಪ್ಯೂಟರ್

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ ಹಾಗೂ ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ ಇವರು ಚಿತ್ರದುರ್ಗ ಶ್ರೀ ಮುರುಘರಾಜೇಂದ್ರ ಬೃಹನ್ಮಠವು ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ಧಾರ್ಮಿಕವಾಗಿ ಅನೇಕ ಶಿಕ್ಷಣ ಮತ್ತು ಸಂಘ ಸಂಸ್ಥೆಗಳನ್ನು ನಡೆಸುತ್ತಾ ಬಂದಿದೆ. ಪೀಠಾಧಿಪತಿಗಳು ದೀರ್ಘ ಕಾಲದಿಂದ ನ್ಯಾಯಾಂಗ ಬಂಧನದಲ್ಲಿರುವುದರಿಂದ ನಿಯಮಬಾಹಿರವಾಗಿ ಶ್ರೀ ಮಠದ ಎಲ್ಲಾ ಆಡಳಿತ ಹಾಗೂ ಆರ್ಥಿಕ ಚಟುವಟಿಕೆಗಳನ್ನು ನಿರ್ವಹಿಸಲು ಬೇರೊಬ್ಬರಿಗೆ ಅಧಿಕಾರ ನೀಡಿರುತ್ತಾರೆ. ಇದರಿಂದ ಶ್ರೀಮಠದ ಆಸ್ತಿ ಮತ್ತು ಹಣ ದುರ್ಬಳಕೆ ಆಗುವ ಸಾಧ್ಯತೆ ಇರುವುದರಿಂದ, ಶಿಕ್ಷಣ ಸಂಸ್ಥೆಗಳ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆ ಮೇಲೆ ತುಂಬಾ ವ್ಯತಿರಿಕ್ತ ಪರಿಣಾಮ ಉಂಟಾಗುವ ಸಾಧ್ಯತೆ ಇರುವ ಹಿನ್ನಲೆಯಲ್ಲಿ ಇದುವರೆವಿಗೂ ಸರ್ಕಾರ ಆಡಳಿತಾಧಿಕಾರಿಯನ್ನು ನೇಮಿಸದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮುಖ್ಯಮಂತ್ರಿಗಳ ಹೇಳಿಕೆ.**

**ಉತ್ತರ:-**

ಚಿತ್ರದುರ್ಗ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಪೀಠಾಧಿಪತಿ ಮತ್ತು ಎಸ್.ಜೆ.ಎಂ. ವಿದ್ಯಾಪೀಠದ ಅಧ್ಯಕ್ಷರು ಆಗಿರುವ ಶ್ರೀ ಶಿವಮೂರ್ತಿ ಮುರುಘಾ ಶರಣರು ದಿನಾಂಕ:01.09.2022 ರಿಂದ ನ್ಯಾಯಾಂಗ ಬಂಧನದಲ್ಲಿ ಇರುವುದರಿಂದ, ಸದರಿ ಸಂಸ್ಥೆಯ ನಿರ್ವಹಣೆಯಲ್ಲಿ ಈ ಸಂಸ್ಥೆಯ ದಿನನಿತ್ಯದ ಕಾರ್ಯಚಟುವಟಿಕೆಗೆ ಹಾಗೂ ಮೇಲುಸ್ತುವಾರಿ ನಡೆಸಲು ಸಾರ್ವಜನಿಕ ಹಿತದೃಷ್ಟಿಯಿಂದ ಮಠದ ಚರಾ-ಸ್ಥಿರ ಆಸ್ತಿಗಳನ್ನು ಸಂರಕ್ಷಿಸುವ ಹಿತದೃಷ್ಟಿಯಿಂದ ಹಾಗೂ ಸಂಸ್ಥೆಯ ಹಣ ದುರುಪಯೋಗ ಆಗದಂತೆ ಲೆಕ್ಕಪತ್ರಗಳನ್ನು ನಿರ್ವಹಿಸುವ ಹಾಗೂ ಒಟ್ಟಾರೆ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ನಡೆಸುವ ಹಿತದೃಷ್ಟಿಯಿಂದ, ಸರ್ಕಾರದ ಆದೇಶ ಸಂಖ್ಯೆ: ಕಂಇ 112 ಮುಸೇವಿ 2022 ದಿನಾಂಕ:13-12-2022ರಲ್ಲಿ ಶ್ರೀ ಪಿ. ಎಸ್. ವಸ್ತ್ರದ್, ಐ.ಎ.ಎಸ್ (ನಿವೃತ್ತರು), ಬೆಂಗಳೂರು ಇವರನ್ನು ಸದರಿ ಟ್ರಸ್ಟ್ ಮತ್ತು ಶಿಕ್ಷಣ ಸಂಸ್ಥೆಗೆ "ಆಡಳಿತಾಧಿಕಾರಿ"ಯನ್ನಾಗಿ ನೇಮಿಸಿ ಆದೇಶಿಸಲಾಗಿರುತ್ತದೆ.

(ಸಂಖ್ಯೆ:ಕಂಇ 230 ಮುಸಪ್ರ 2022)

**(ಬಸವರಾಜ ಬೊಮ್ಮಾಯಿ)**
ಮುಖ್ಯಮಂತ್ರಿ,